# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1422 (1679)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಶುದ್ಧ ಕುಡಿಯುವ ನೀರಿನ ಘಟಕ ನಿರ್ವಹಣೆ ಕುರಿತು

(ಅ) ಕಳೆದ ಮೂರು ವರ್ಷಗಳಲ್ಲಿ ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ ಮಾಡಲಾಗಿದೆ;

(ಆ) ಕುಡಿಯುವ ನೀರಿನ ಘಟಕ ನಿರ್ಮಾಣ ಕಾರ್ಯವನ್ನು ಯಾವ ಖಾಸಗಿ ಕಂಪನಿಗೆ ವಹಿಸಲಾಗಿದೆ ಮತ್ತು ಇಲ್ಲಿಯವರಿಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ;

(ಇ) ಕುಡಿಯುವ ನೀರಿನ ಘಟಕ ಪ್ರಾರಂಭವಾಗಿ ಕೆಲವು ದಿವಸಗಳ ನಂತರ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು;

(ಈ) ಘಟಕಗಳಿಗೆ ಸಾಕಷ್ಟು ಹಣ ವೆಚ್ಚ ಮಾಡಿ ನಿರ್ಮಾಣ ಮಾಡಿದಾಗ್ಯೂ ಸಿಬ್ಬಂದಿಗಳು ಸರಿಯಾಗಿ ನಿರ್ವಹಣೆ ಮಾಡದೇ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು?